# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಹಿರಿಯ ವೇತನ ಶ್ರೇಣಿ – ಕೆಳ ಹುದ್ದೆಯ ವೇತನ ಶ್ರೇಣಿಯಲ್ಲಿ ಮುಂದುವರಿಯಲು ಅಭಿಮತ ನೀಡುವ ಕಾಲಮಿತಿಯನ್ನು ವಿಸ್ತರಿಸುವ ಕುರಿತು.**

ಓದಲಾಗಿದೆ :
1. ಸ.ಅ.ಸಂಖ್ಯೆ: ಎಫ್‌ಡಿ 25 ಎಸ್‌ಆರ್‌ಪಿ 1991, ದಿನಾಂಕ: 29.10.1991.
2. ಸ.ಅ.ಸಂಖ್ಯೆ: ಎಫ್‌ಡಿ 25 ಎಸ್‌ಆರ್‌ಪಿ 1991, ದಿನಾಂಕ: 04.01.1993.
3. ಸ.ಅ.ಸಂಖ್ಯೆ: ಎಫ್‌ಡಿ 28 ಎಸ್‌ಆರ್‌ಪಿ 1994, ದಿನಾಂಕ: 24.11.1994.
4. ಸ.ಅ.ಸಂಖ್ಯೆ: ಎಫ್‌ಡಿ 27 ಎಸ್‌ಆರ್‌ಪಿ 1999, ದಿನಾಂಕ: 30.07.1999.
5. ಸ.ಅ.ಸಂಖ್ಯೆ: ಎಫ್‌ಡಿ 16 ಎಸ್‌ಆರ್‌ಪಿ 2002(II), ದಿನಾಂಕ: 14.06.2002.
6. ಸ.ಅ.ಸಂಖ್ಯೆ: ಎಫ್‌ಡಿ 24 ಎಸ್‌ಆರ್‌ಪಿ 2013(II), ದಿನಾಂಕ: 14.11.2013.

**ಪ್ರಸ್ತಾವನೆ :**

ಕರ್ನಾಟಕ ನಾಗರೀಕ ಸೇವಾ (ಹಿರಿಯ ವೇತನ ಶ್ರೇಣಿಗೆ ಸ್ವಯಂಚಾಲಿತ ವಿಶೇಷ ಮುಂಬಡ್ತಿ) ನಿಯಮಗಳು, 1991 ರ ನಿಯಮ 3 ರ ಕೆಳಗೆ ಅಧಿಸೂಚನೆ ಸಂಖ್ಯೆ: ಎಫ್‌ಡಿ 25 ಎಸ್‌ಆರ್‌ಪಿ 1991 ದಿನಾಂಕ 04.01.1993 ರಲ್ಲಿ ಸೇರ್ಪಡೆ ಮಾಡಿದ ಪರಂತುಕ (iii) ರ ಪ್ರಕಾರ ಸರ್ಕಾರಿ ನೌಕರನು ದಿನಾಂಕ: 01.06.1991 ರಂದು ಅಥವಾ ನಂತರ ಒಂದೇ ಹುದ್ದೆಯಲ್ಲಿ 15 ವರ್ಷಗಳ ಸೇವೆಯನ್ನು ಪೂರೈಸುವ ಮುನ್ನ ಉನ್ನತ ಹುದ್ದೆಗೆ ಮುಂಬಡ್ತಿ ಹೊಂದಿದಲ್ಲಿ, ಹಿರಿಯ ವೇತನ ಶ್ರೇಣಿಗೆ ಅರ್ಹತೆ ಪಡೆಯುವವರೆಗೆ, ಕೆಳ ಹುದ್ದೆಯ ವೇತನ ಶ್ರೇಣಿ ಅಥವಾ ಆಯ್ಕೆ ಕಾಲಿಕ ವೇತನ ಶ್ರೇಣಿಯಲ್ಲಾಗಲೀ, ಮುಂದುವರೆಯಲು ಇಚ್ಛಿಸಿದಲ್ಲಿ, ಆ ನೌಕರನು ತಾನು ಮುಂಬಡ್ತಿ ಹೊಂದಿದ ದಿನಾಂಕದಿಂದ ಅಥವಾ ಕರ್ನಾಟಕ ನಾಗರೀಕ ಸೇವಾ (ಹಿರಿಯ ವೇತನ ಶ್ರೇಣಿಗೆ ಸ್ವಯಂ ಚಾಲಿತ ವಿಶೇಷ ಮುಂಬಡ್ತಿ) (ತಿದ್ದುಪಡಿ) ನಿಯಮಗಳು, 1993 ಪ್ರಾರಂಭವಾದ ದಿನಾಂಕದಿಂದ, ಈ ಎರಡರಲ್ಲಿ ಯಾವುದು ನಂತರವೋ ಅಲ್ಲಿಂದ ಎರಡು ತಿಂಗಳ ಅವಧಿಯೊಳಗಾಗಿ ತನ್ನ ಅಭಿಮತವನ್ನು ಬರವಣಿಗೆಯಲ್ಲಿ ನೇಮಕಾತಿ ಪ್ರಾಧಿಕಾರಿಗಳಿಗೆ ಸಲ್ಲಿಸತಕ್ಕದ್ದೆಂದು ಆದೇಶಿಸಲಾಗಿತ್ತು.

ಮೇಲೆ ಉಲ್ಲೇಖ (3) ರಿಂದ (6) ರವರೆಗೆ ಓದಲಾದ ಸರ್ಕಾರಿ ಆದೇಶಗಳಲ್ಲಿ ಹಿರಿಯ ವೇತನ ಶ್ರೇಣಿಗೆ ಅಭಿಮತ ಸಲ್ಲಿಸಲು ನಿಗದಿಪಡಿಸಿರುವ ಕಾಲಮಿತಿಯನ್ನು ಕಾಲಕಾಲಕ್ಕೆ ದಿನಾಂಕ 31.12.2013 ರವರೆಗೆ ವಿಸ್ತರಿಸಲಾಗಿತ್ತು. ಹಲವು ಇಲಾಖೆಗಳು ಈ ಕಾಲಾವಧಿಯನ್ನು ಮತ್ತೊಮ್ಮೆ ವಿಸ್ತರಿಸುವಂತೆ ಪ್ರಸ್ತಾಪಿಸಿದ್ದು, ಸರ್ಕಾರವು ಇದನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 13 ಎಸ್‌ಆರ್‌ಪಿ 2015(II),**
**ಬೆಂಗಳೂರು, ದಿನಾಂಕ: 20 ನೇ ಜೂನ್ 2015**

ದಿನಾಂಕ 01.06.1991 ರಂದು ಅಥವಾ ತದನಂತರದಲ್ಲಿ ಉನ್ನತ ಹುದ್ದೆಗಳಿಗೆ ಪದೋನ್ನತಿ ಹೊಂದಿರುವ ಸರ್ಕಾರಿ ನೌಕರರು ಹಿರಿಯ ವೇತನ ಶ್ರೇಣಿಯ ಸೌಲಭ್ಯವನ್ನು ಪಡೆಯಲು ಅಭಿಮತ ನೀಡಲು, ನಿಗದಿಪಡಿಸಲಾದ ಕಾಲಾವಧಿಯನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ **3 ತಿಂಗಳವರೆಗೆ** ಮತ್ತೆ ವಿಸ್ತರಿಸಲು ಸರ್ಕಾರವು ಹರ್ಷಿಸುತ್ತದೆ.

ಇಲಾಖಾ ಮುಖ್ಯಸ್ಥರುಗಳು ಈ ಆದೇಶವನ್ನು ಸಂಬಂಧಪಟ್ಟ ಎಲ್ಲಾ ನೌಕರರ ಗಮನಕ್ಕೆ ತರುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

**ಸಂಕಲನಕಾರರು, ಕರ್ನಾಟಕ ಗೆಜೆಟ್,** ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು

1. ಗೆ,
2. ಸರ್ಕಾರದ ಮುಖ್ಯ ಕಾರ್ಯದರ್ಶಿ/ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ ಜಿಲ್ಲೆಗಳ ಜಿಲ್ಲಾಧಿಕಾರಿಗಳು
4. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
5. ಪ್ರಧಾನ ಮಹಾಲೇಖಪಾಲರು(ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು(ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ ಬೆಂಗಳೂರು
7. ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು
8. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ,ಬೆಂಗಳೂರು
9. ರಿಜಿಸ್ಟ್ರಾರ್, ಕರ್ನಾಟಕ ನ್ಯಾಯ ಮಂಡಳಿ, ಬೆಂಗಳೂರು
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
11. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ
12. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು
13. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು
14. ಪ್ರಾಜೆಕ್ಟ್ ಆಫೀಸರ್, ಹೆಚ್.ಎಂ.ಆರ್.ಎಸ್. ಕೊಠಡಿ ಸಂಖ್ಯೆ:145ಎ, ಬಹುಮಹಡಿ ಕಟ್ಟಡ, ಬೆಂಗಳೂರು
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
16. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು
17. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ
18. ವಾರಪತ್ರ/ಶಾಖೆಯ ರಕ್ಷಾ ಕಡತ

**www.finance.kar.nic.in**